## ಕರ್ನಾಟಕ ವಿಧಾನ ಪರಿಷತ್ತು

01. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 811

02. ಸದಸ್ಯರ ಹೆಸರು : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

03. ಉತ್ತರಿಸುವ ದಿನಾಂಕ : 26-12-2022

04. ಉತ್ತರಿಸುವ ಸಚಿವರು : ಮಾನ್ಯ ಗೃಹ ಸಚಿವರು

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ನಿರ್ಭಯ ಯೋಜನೆ ಅಡಿಯಲ್ಲಿ ಕಳೆದ 5 ವರ್ಷಗಳಲ್ಲಿ ವಿವಿಧ ಇಲಾಖೆ ಅಡಿ ಕೈಗೊಂಡಿರುವ ಕಾರ್ಯಕ್ರಮಗಳು ಯಾವುವು; ಈ ಕಾರ್ಯಕ್ರಮಗಳಿಗೆ ಕೇಂದ್ರ ಸರ್ಕಾರದಿಂದ ದೊರೆತಿರುವ ಅನುದಾನವೆಷ್ಟು; (ಇಲಾಖಾವಾರು ಮತ್ತು ವರ್ಷವಾರು ಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ನಿರ್ಭಯ ಯೋಜನೆ ಅಡಿಯಲ್ಲಿ ಕಳೆದ 5 ವರ್ಷಗಳಲ್ಲಿ ಪೊಲೀಸ್ ಇಲಾಖೆ ಅಡಿ ಕೈಗೊಂಡಿರುವ ಕಾರ್ಯಕ್ರಮಗಳು ಹಾಗೂ ಕೇಂದ್ರ ಸರ್ಕಾರದಿಂದ ದೊರೆತಿರುವ ಅನುದಾನದ ವಿವಿರ ಕೆಳಕಂಡಂತಿದೆ.<br>• ರಾಜ್ಯದಲ್ಲಿ ನಿರ್ಭಯ ಯೋಜನೆಯಡಿಯಲ್ಲಿ "ಬೆಂಗಳೂರು ಸೇಫ್ ಸಿಟಿ ಯೋಜನೆ" ಅನುಷ್ಠಾನಗೊಳಿಸಲಾಗುತ್ತಿದೆ.<br>• ಸೇಫ್ ಸಿಟಿ ಯೋಜನೆಗೆ ಒಟ್ಟು ರೂ.667 ಕೋಟಿಗಳ ಅನುದಾನ ಅನುಮೋದನೆಗೊಂಡಿರುತ್ತದೆ. ಕೇಂದ್ರ ಸರ್ಕಾರದ ಪಾಲು 60% ರೂ.400.2 ಕೋಟಿ ಮತ್ತು ರಾಜ್ಯ ಸರ್ಕಾರದ ಪಾಲು 40% ರೂ.266.8 ಕೋಟಿ<br>• ಕೇಂದ್ರ ಸರ್ಕಾರದಿಂದ ಮೊದಲನೇ ಕಂತಿನ ಅನುದಾನ ರೂ.167.26 ಕೋಟಿ ಮತ್ತು ರಾಜ್ಯ ಸರ್ಕಾರದ ಅನುದಾನ ರೂ.111.50 ಕೋಟಿ ಒಟ್ಟು 278.76 ಕೋಟಿ 2019-20ನೇ ಸಾಲಿನಲ್ಲಿ ಬಿಡುಗಡೆಯಾಗಿರುತ್ತದೆ.<br>2 ಮತ್ತು 3ನೇ ಕಂತಿನ ಒಟ್ಟು ಅನುದಾನ ರೂ.388.24 ಕೋಟಿ ಅನುದಾನ ಬಿಡುಗಡೆಗೆ ಬಾಕಿ ಇರುತ್ತದೆ.<br>ರಾಜ್ಯದಲ್ಲಿ ನಿರ್ಭಯ ಯೋಜನೆ ಅಡಿ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆಗಾಗಿ ಪೊಲೀಸ್ ಇಲಾಖೆಯ ವತಿಯಿಂದ 800 ಪೊಲೀಸ್ ಠಾಣೆಗಳಲ್ಲಿ ಮಹಿಳಾ ಹೆಲ್ಪ್ ಡೆಸ್ಕ್‌ಗಳನ್ನು ಸ್ಥಾಪಿಸಲಾಗಿರುತ್ತದೆ. ಪ್ರಸ್ತುತ 250 ಮಹಿಳಾ ಹೆಲ್ಪ್ ಡೆಸ್ಕ್‌ಗಳನ್ನು ಸ್ಥಾಪಿಸುವ ಕಾರ್ಯ ಪ್ರಗತಿಯಲ್ಲಿರುತ್ತದೆ. ಅಂತೆಯೇ 35 ಮಾನವ ಕಳ್ಳ ಸಾಗಾಣಿಗೆ ನಿಷೇಧ ಘಟಕಗಳನ್ನು ಸ್ಥಾಪಿಸಲಾಗಿರುತ್ತದೆ. ಮೇಲ್ಕಂಡ ಯೋಜನೆಗಳಿಗೆ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ವಿವರಗಳು ಈ ಕೆಳಕಂಡಂತಿರುತ್ತದೆ. |

| ವರ್ಷ | ಮಹಿಳಾ ಹೆಲ್ಪ್ ಡೆಸ್ಕ್‌ಗಳಿಗೆ ಬಿಡುಗಡೆಯಾದ ಅನುದಾನದ ಮೊತ್ತ | ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕ ಬಿಡುಗಡೆಯಾದ ಅನುದಾನದ ಮೊತ್ತ |
|---|---|---|

| | | | | |
|---|---|---|---|---|
| | | 2020–21 | 7.00 ಕೋಟಿ | 3.88 ಕೋಟಿ |
| | | 2021–22 | 1.00 ಕೋಟಿ | 0.38 ಕೋಟಿ |
| | | 2022–23 | 2.50 ಕೋಟಿ | – |
| | | ಒಟ್ಟು | 10.50 ಕೋಟಿ | 4.26 ಕೋಟಿ |

| | | |
|---|---|---|
| (ಆ) | ರಾಜ್ಯ ಸರ್ಕಾರಗಳಿಗೆ ಈ ಯೋಜನೆ ಅಡಿ ನೀಡಿದ ಅನುದಾನವನ್ನು ಬಳಕೆ ಮಾಡಲು ಕೇಂದ್ರ ಸರ್ಕಾರ ನಿಗದಿಪಡಿಸಿರುವ ಸಮಯವೆಷ್ಟು:(ಪೂರ್ಣ ವಿವರ ನೀಡುವುದು). | ರಾಜ್ಯ ಸರ್ಕಾರಗಳಿಗೆ ಈ ಯೋಜನೆ ಅಡಿ ನೀಡಿದ ಅನುದಾನವನ್ನು ಬಳಕೆ ಮಾಡಲು ಕೇಂದ್ರ ಸರ್ಕಾರ ನಿಗದಿಪಡಿಸಿರುವ ಸಮಯ<br><br>1) ಬೆಂಗಳೂರು ನಗರ ಸೇಫ್ ಸಿಟಿ ಯೋಜನೆಯು 2018–19 ರಿಂದ 2020–21ನೇ ಸಾಲಿನ ವರೆಗೆ 3 ವರ್ಷಗಳಿಗೆ ಅನುಮೋದನೆಗೊಂಡಿರುವ ಯೋಜನೆಯಾಗಿರುತ್ತದೆ. ಪ್ರಸ್ತುತ 30–09–2022ರ ವರೆಗೆ ಯೋಜನೆಯ ಅವಧಿಯನ್ನು ವಿಸ್ತರಿಸಲಾಗಿದೆ. ದಿ:30–06–2023 ರವರೆಗೆ ಯೋಜನೆಯನ್ನು ವಿಸ್ತರಿಸಲು ಮುಖ್ಯ ಕಾರ್ಯದರ್ಶಿಯವರ ಮುಖೇನ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದೆ.<br><br>2) ಮಹಿಳಾ ಹೆಲ್ಪ್ ಡೆಸ್ಕ್ ಹಾಗೂ ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸುವ ಸಂಬಂಧ ಬಿಡುಗಡೆ ಮಾಡಲಾದ ಅನುದಾನವನ್ನು ಬಿಡುಗಡೆ ಮಾಡಿದ ಆರ್ಥಿಕ ವರ್ಷದಲ್ಲೆ ಬಳಕೆ ಮಾಡುವಂತೆ ಸಮಯ ನಿಗದಿಯಾಗಿರುತ್ತದೆ. |
| (ಇ) | ಈ ಅನುದಾನವನ್ನು ಸದ್ಬಳಕೆ ಮಾಡದೆ ಹಾಗೂ ಬಳಕೆ ಪ್ರಮಾಣ ಪತ್ರವನ್ನು ನೀಡದಿರುವುದರಿಂದ ಕೇಂದ್ರ ಸರ್ಕಾರ ವಾಪಸ್ ಪಡೆದಿರುವ ಅನುದಾನವೆಷ್ಟು; ಈ ವಿಫಲತೆಗೆ ಕಾರಣರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಜರುಗಿಸಿದೆ? (ಪೂರ್ಣ ವಿವರ ನೀಡುವುದು). | 1) ಬೆಂಗಳೂರು ನಗರ ಸೇಫ್ ಸಿಟಿ ಯೋಜನೆಗೆ ಕೇಂದ್ರ ಸರ್ಕಾರ ಮೊದಲನೇ ಕಂತಿನ ಅನುದಾನ ರೂ167.26 ಕೋಟಿಗಳನ್ನು 2019–20ನೇ ಸಾಲಿನಲ್ಲಿ ಬಿಡುಗಡೆ ಮಾಡಿದ್ದು, ಸದರಿ ಅನುದಾನವನ್ನು ಪೂರ್ಣವಾಗಿ ಬಳಕೆ ಮಾಡಲಾಗಿದೆ.<br><br>2) ಮಹಿಳಾ ಹೆಲ್ಪ್ ಡೆಸ್ಕ್ ಹಾಗೂ ಮಾನವ ಕಳ್ಳ ಸಾಗಾಣಿಕೆ ನಿಷೇಧ ಘಟಕಗಳನ್ನು ಸ್ಥಾಪಿಸುವ ಸಂಬಂಧ ನಿಗದಿಪಡಿಸಿದ ಮೊತ್ತವನ್ನು ಪೂರ್ಣ ಪ್ರಮಾಣದಲ್ಲಿ ಬಳಕೆ ಮಾಡಿಕೊಂಡು ಕೇಂದ್ರ ಸರ್ಕಾರಕ್ಕೆ ಬಳಕೆ ಪ್ರಮಾಣ ಪತ್ರಗಳನ್ನು ಸಲ್ಲಿಸಲಾಗಿರುತ್ತದೆ.<br><br>ಆದ್ದರಿಂದ, ಸದರಿ ಅನುದಾನವನ್ನು ಕೇಂದ್ರ ಸರ್ಕಾರವು ವಾಪಸ್ ಪಡೆದಿರುವುದಿಲ್ಲ. |

ಸಂಖ್ಯೆ: 683 ಎಸ್ ಎಸ್ ಟಿ 2022

(ಅರಗ ಜ್ಞಾನೇಂದ್ರ)
ಗೃಹ ಸಚಿವರು